ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

(17)

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ

ದಿನಾಂಕ : DATE: 20/3/21

ನಿಧನ ವಾರ್ತೆ

# ಮಾಜಿ ಸಚಿವ ಎಚ್.ಟಿ.ಕೃಷ್ಣಪ್ಪ

ಪ್ರ.ವಾ. 20-3-21



ಮಂಡ್ಯ: ಮಾಜಿ ಸಚಿವ ಎಚ್.ಟಿ.ಕೃಷ್ಣಪ್ಪ (91) ಗುರುವಾರ ರಾತ್ರಿ ಬೆಂಗಳೂರಿನಲ್ಲಿ ತಮ್ಮ ಪುತ್ರನ ನಿವಾಸದಲ್ಲಿ ನಿಧನರಾದರು. ಸಜ್ಜನ ರಾಜಕಾರಣಿ ಎಂದೇ ಗುರುತಿಸಿಕೊಂಡಿದ್ದ ಕೃಷ್ಣಪ್ಪ, ಆರಂಭದಲ್ಲಿ ತಾಲ್ಲೂಕು ಬೋರ್ಡ್ ಅಧ್ಯಕ್ಷರಾಗಿ ಕೆಲಸ ಮಾಡಿದ್ದರು.

ಅವರಿಗೆ ಪುತ್ರ ಸುದರ್ಶನ್ ಇದ್ದಾರೆ. ನಾಗಮಂಗಲ ಸಮೀಪದ ಅವರ ತೋಟದಲ್ಲಿ ಶುಕ್ರವಾರ ಸಂಜೆ ಅಂತ್ಯಕ್ರಿಯೆ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

1973ರಲ್ಲಿ ನಡೆದ ವಿಧಾನಸಭೆ ಉಪ ಚುನಾವಣೆಯಲ್ಲಿ ನಾಗಮಂಗಲ ಕ್ಷೇತ್ರದಿಂದ ಕಾಂಗ್ರೆಸ್‌ನಿಂದ ಸ್ಪರ್ಧಿಸಿ ಗೆಲುವು ಸಾಧಿಸಿದ್ದರು. 1978ರ ಚುನಾವಣೆಯಲ್ಲಿ ಮತ್ತೆ ಕಾಂಗ್ರೆಸ್‌ನಿಂದ ಗೆದ್ದ ಅವರು, ದೇವರಾಜ ಅರಸು ಸರ್ಕಾರದಲ್ಲಿ ರೇಷ್ಮೆ ಸಚಿವರಾಗಿ ಕೆಲಸ ಮಾಡಿದ್ದರು.

1984ರಲ್ಲಿ ನಡೆದ ಉಪ ಚುನಾವಣೆಯಲ್ಲಿ ಪಕ್ಷೇತರರಾಗಿ ಸ್ಪರ್ಧಿಸಿ ಗೆದ್ದರಾದರೂ ಪ್ರಮಾಣ ವಚನ ಸ್ವೀಕರಿಸುವ ಮೊದಲೇ ರಾಮಕೃಷ್ಣ ಹೆಗಡೆ ಸರ್ಕಾರ ವಿಸರ್ಜನೆಗೊಂಡು ಸಾರ್ವತ್ರಿಕ ಚುನಾವಣೆ ಎದುರಾಯಿತು. 1985ರಲ್ಲಿ ನಡೆದ ಸಾರ್ವತ್ರಿಕ ಚುನಾವಣೆಯಲ್ಲಿ ಜನತಾ ಪಕ್ಷದಿಂದ ಸ್ಪರ್ಧಿಸಿ, ಗೆದ್ದು ರಾಮಕೃಷ್ಣ ಹೆಗಡೆ ಅವರ ಸರ್ಕಾರದಲ್ಲಿ ಆರೋಗ್ಯ, ಅಬಕಾರಿ, ವೈದ್ಯಕೀಯ ಶಿಕ್ಷಣ ಸಚಿವರಾಗಿ ಕಾರ್ಯ ನಿರ್ವಹಿಸಿದ್ದರು.

1994ರಲ್ಲಿ ಜನತಾ ಪಕ್ಷದಿಂದ ಲೋಕಸಭೆಗೆ, 1996ರಲ್ಲಿ ರಾಜ್ಯಸಭೆ ಚುನಾವಣೆಯಲ್ಲಿ ಸ್ಪರ್ಧಿಸಿ ಸೋತರು. ನಂತರ ರಾಜಕಾರಣದಿಂದ ದೂರಸರಿದರು. ವಕೀಲಿ ವೃತ್ತಿಯಿಂದ ಹೆಸರುವಾಸಿಯಾಗಿ ಅವರು ರಾಜಕಾರಣ ಪ್ರವೇಶಿಸಿದ್ದರು. ನಾಗಮಂಗಲ ತಾಲ್ಲೂಕಿಗೆ ಹೇಮಾವತಿ ನೀರು ತರುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು.